ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 15/3/21

ಅಧಿಕಾರಿಗಳು, ತಜ್ಞರ ಜೊತೆ ಸಮಾಲೋಚನೆ ಬಳಿಕ ಮುಖ್ಯಮಂತ್ರಿ ಬಿಎಸ್‌ವೈ ಅವರಿಂದ ನಿರ್ಧಾರ ಪ್ರಕಟ ಸಾಧ್ಯತೆ

# ಕೊರೊನಾ ನಿರ್ಲಕ್ಷಿಸಿದರೆ ಲಾಕ್‌ಡೌನ್ ಅನಿವಾರ್ಯ

15/3/21

ಸಂ.ಕ. ಸಮಾಚಾರ, ಬೆಂಗಳೂರು

ರಾಜ್ಯದಲ್ಲಿ ಕೊರೊನಾ ಸೋಂಕು ಹೆಚ್ಚಳವಾಗುತ್ತಿರುವ ಹಿನ್ನೆಲೆಯಲ್ಲಿ ಸೋಮವಾರ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಅಧಿಕಾರಿಗಳ ಜೊತೆ ಮಹತ್ವದ ಸಭೆ ನಡೆಯಲಿದ್ದು, ಮತ್ತೆ ಲಾಕ್‌ಡೌನ್ ಜಾರಿ ಮಾಡಬೇಕೆ ಅಥವಾ ಬೇಡವೆ ಎಂಬ ಬಗ್ಗೆ ಅಧಿಕಾರಿಗಳ ಅಭಿಪ್ರಾಯ ಕೇಳಲಾಗುತ್ತದೆ.

ಕಳೆದ 10 ದಿನಗಳ ಹಿಂದೆ ಸೋಂಕಿನ ಪ್ರಮಾಣ ತಹಬದಿಗೆ ಬಂದಿತ್ತು. ನಂತರ ದಿನೇ ದಿನೇ ಹೆಚ್ಚಳವಾಗುತ್ತಿರುವ ಹಿನ್ನೆಲೆಯಲ್ಲಿ ರಾಜ್ಯದ ಜನರಲ್ಲಿ ಆತಂಕ ಸೃಷ್ಟಿಯಾಗಿರುವ ಹಿನ್ನೆಲೆಯಲ್ಲಿ ಸೋಂಕಿನ ಪ್ರಮಾಣ ಏರಿಕೆಗೆ ಕಡಿವಾಣ ಹಾಕುವ ಹಿನ್ನೆಲೆಯಲ್ಲಿ ಏನು ಕ್ರಮ ಕೈಗೊಳ್ಳಬೇಕು ಎಂಬ ಬಗ್ಗೆ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಯಡಿಯೂರಪ್ಪ ಅವರು ಸೋಮವಾರ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಸಭೆ ನಡೆಸಲಿದ್ದು, ಸೋಂಕು ಮತ್ತಷ್ಟು ಹೆಚ್ಚಳವಾಗದಂತೆ ಏನು ಕ್ರಮ ತೆಗೆದುಕೊಳ್ಳಬೇಕು ಎಂಬ ಬಗ್ಗೆ ಮಾಹಿತಿ ಪಡೆದುಕೊಳ್ಳಲಿದ್ದಾರೆ.



ಒಂದು ವೇಳೆ ರಾಜ್ಯದಲ್ಲಿ ಮತ್ತೆ ಲಾಕ್‌ಡೌನ್ ಅಥವಾ ನೈಟ್ ಕರ್ಫ್ಯೂ ಹಾಕಿದರೆ ಜನಸಾಮಾನ್ಯರಿಗೆ ಸಮಸ್ಯೆ ಎದುರಾಗುವುದಲ್ಲದೆ, ಈಗಷ್ಟೆ ಚೇತರಿಸಿಕೊಂಡಿರುವ ಆರ್ಥಿಕ ಚಟುವಟಿಕೆ ಮತ್ತೆ ಸಂಕಷ್ಟದತ್ತ ಹೋಗಬಹುದು.

ಈ ಹಿನ್ನೆಲೆಯಲ್ಲಿ ಲಾಕ್‌ಡೌನ್ ಜಾರಿ ಮಾಡದೇ ಹಲವು ಕಠಿಣ ರೀತಿಯ ಕ್ರಮಗಳನ್ನು ತೆಗೆದುಕೊಳ್ಳುವ ಸಾಧ್ಯತೆಗಳ ಕುರಿತು ಸಭೆಯಲ್ಲಿ ಚರ್ಚೆ ಮಾಡುವ ಸಂಭವ ಇದೆ.

ರಾಜ್ಯದಲ್ಲಿ ಮತ್ತೆ ಲಾಕ್‌ಡೌನ್ ಜಾರಿ ಮಾಡಲಾಗುವುದೇ ಎಂಬ ಬಗ್ಗೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರೇ ಮಾಧ್ಯಮಗಳ ಜೊತೆ ಮಾಹಿತಿ ಹಂಚಿಕೊಂಡಿದ್ದು, ಯಾವುದೇ ಕಾರಣಕ್ಕೂ ಲಾಕ್‌ಡೌನ್ ಅಥವಾ ನೈಟ್ ಕರ್ಫ್ಯೂ ಹೇರುವಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ.

ಮಹಾರಾಷ್ಟ್ರದಲ್ಲಿ ಕೊರೊನಾ ಹೆಚ್ಚಾಗುತ್ತಿದೆ. ಗಡಿಗಳಲ್ಲಿಯೂ ಬಿಗಿ ಕ್ರಮ ಕೈಗೊಳ್ಳುವ ಬಗ್ಗೆ ನಿರ್ಧಾರ ಮಾಡಲಾಗುತ್ತದೆ. ಲಾಕ್‌ಡೌನ್ ಮಾಡಲು ಅವಕಾಶ ಕೊಡದಂತೆ ಕ್ರಮ ಕೈಗೊಳ್ಳಲಾಗುವುದು.

ಇತ್ತೀಚಿನ ದಿನಗಳಲ್ಲಿ ಕೊರೊನಾ ಸೋಂಕು ದಿನೇ ದಿನೇ ಹೆಚ್ಚಾಗುತ್ತಿದೆ. ಇದರ ನಿಯಂತ್ರಣಕ್ಕೆ ಜನ ಸಹಕರಿಸಬೇಕು, ಲಾಕ್‌ಡೌನ್ ಆಗಬಾರದು, ಕರ್ಫ್ಯೂ ಮಾಡಬಾರದು ಅಂತಿದ್ದರೆ, ಸಹಕರಿಸಿ ಮಾಸ್ಕ್ ಧರಿಸಬೇಕು. ಕೊರೊನಾ ನಿಯಮ ಪಾಲಿಸಬೇಕು, ಜನ ಸಹಕರಿಸಿದರೆ ಲಾಕ್‌ಡೌನ್ ಇಲ್ಲದೆ ಕೊರೊನಾ ಸೋಂಕು ಹರಡುವುದನ್ನು ನಿಯಂತ್ರಿಸಬಹುದು ಎಂದರು.

ಈಗ ಲಾಕ್‌ಡೌನ್ ಮಾಡಿದಲ್ಲಿ ವ್ಯಾಪಾರ ವಹಿವಾಟು ಸ್ಥಗಿತವಾಗಲಿದೆ. ಈ ಹಿಂದೆ ಲಾಕ್‌ಡೌನ್‌ನಿಂದ ಈಗಾಗಲೇ ಸಾಕಷ್ಟು ನಷ್ಟ ಆಗಿದೆ. ಏನು ಕ್ರಮ ತೆಗೆದುಕೊಳ್ಳಬಹುದು ಎಂಬುದರ ಕುರಿತು ಚರ್ಚೆ ಮಾಡಲು ಸೋಮವಾರ ಈ ಬಗ್ಗೆ ಸಭೆ ಕರೆದಿದ್ದು, ಇಲ್ಲಿ ಮಹತ್ವದ ಚರ್ಚೆ ಆಗುತ್ತದೆ. ಈಗಾಗಲೇ ಏನು ಕ್ರಮ ಕೈಗೊಳ್ಳಬಹುದು ಎಂಬ ಬಗ್ಗೆ ಮುಖ್ಯ ಕಾರ್ಯದರ್ಶಿಗಳ ಜೊತೆ ಮಾತುಕತೆ ಮಾಡಲಾಗಿದೆ. ಈ ವಿಷಯವನ್ನು ಸಭೆಯಲ್ಲೂ ಚರ್ಚೆ ಮಾಡಲಾಗುತ್ತದೆ ಎಂದು ಹೇಳಿದರು.

## ಸಚಿವರ ಜೊತೆ ಸಭೆ

ಕೊರೊನಾ ಸೋಂಕು ನಿಗ್ರಹಕ್ಕೆ ಸಂಬಂಧಿಸಿದಂತೆ ಅಧಿಕಾರಿಗಳ ಜೊತೆ ಮುಖ್ಯಮಂತ್ರಿಗಳು ಸಭೆ ನಡೆಸಿದ ನಂತರ ಸಚಿವರ ಜೊತೆ ಸಭೆ ನಡೆಸಲಿದ್ದು, ಕೊರೊನಾ ನಿಗ್ರಹಕ್ಕೆ ಎಲ್ಲ ಜಿಲ್ಲೆಗಳಲ್ಲೂ ಜಾಗೃತಿ ಮೂಡಿಸುವ ಕಾರ್ಯವಾಗಬೇಕು ಎಂದು ಸೂಚಿಸುವುದರ ಜೊತೆಗೆ ಅಧಿವೇಶನದ ಸಂದರ್ಭದಲ್ಲಿ ಪ್ರತಿಪಕ್ಷಗಳ ಆರೋಪಕ್ಕೆ ಎಲ್ಲರೂ ಒಗ್ಗಟ್ಟಾಗಿ ಎದಿರೇಟು ನೀಡುವ ಕಾರ್ಯ ಮಾಡಬೇಕು ಎಂಬ ಬಗ್ಗೆ ಹಾಗೂ ಮೂರು ವಿಧಾನಸಭೆ ಹಾಗೂ ಒಂದು ಲೋಕಸಭೆ ಕ್ಷೇತ್ರದ ಉಪ ಚುನಾವಣೆಗೆ ಸಂಬಂಧಿಸಿದಂತೆಯೂ ಚರ್ಚೆ ಮಾಡುವ ಸಾಧ್ಯತೆಗಳಿವೆ.

## ಪ್ರತಿಪಕ್ಷ ಪ್ರಸ್ತಾಪಕ್ಕೆ ಉತ್ತರ

ಸಿಡಿ ಕುರಿತು ಸಿದ್ದರಾಮಯ್ಯ ಸದನದಲ್ಲಿ ಪ್ರಸ್ತಾಪ ಮಾಡಲು ಸ್ವತಂತ್ರರು. ಅವರು ಪ್ರತಿಪಕ್ಷದವರು ಏನು ಬೇಕಾದರೂ ಪ್ರಸ್ತಾಪ ಮಾಡಲಿ, ಅದನ್ನು ನಾನು ಸ್ವಾಗತಿಸುತ್ತೇನೆ. ವಿರೋಧ ಪಕ್ಷದ ನಾಯಕರಾಗಿ ಅವರು ಪ್ರಸ್ತಾಪ ಮಾಡೋದು ಅಪರಾಧ ಅಲ್ಲ. ಅವರು ಸರ್ಕಾರದ ಗಮನಕ್ಕೆ ತರಲೇಬೇಕು. ನಮ್ಮ ಮಂತ್ರಿಗಳು ಎಚ್ಚರಿಕೆಯಿಂದ ಕೆಲಸ ಮಾಡಲು ಅನುಕೂಲ ಆಗುತ್ತದೆ. ಸಿದ್ದರಾಮಯ್ಯ ಏನೇ ಚರ್ಚೆ ಮಾಡಿದರೂ ಅದನ್ನು ಸ್ವಾಗತ ಮಾಡುತ್ತೇನೆ. ಅವರು ಏನು ಸಲಹೆ ಕೊಡುತ್ತಾರೋ ಅದನ್ನು ನಾನು ಸ್ವೀಕಾರ ಮಾಡಲು ಸಿದ್ಧನಿದ್ದೇನೆ ಮುಖ್ಯಮಂತ್ರಿ ಯಡಿಯೂರಪ್ಪ ಹೇಳಿದರು.